## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **91**

ಸದಸ್ಯರ ಹೆಸರು : **ಮಧು ಜಿ ಮಾದೇಗೌಡ (ಪದವೀಧರರ ಕ್ಷೇತ್ರ)**

ಉತ್ತರಿಸುವ ದಿನಾಂಕ : **04/03/2025**

ಉತ್ತರಿಸುವ ಸಚಿವರು : **ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು**

| | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಗ್ರಾಮ ಪಂಚಾಯಿತಿಯಿಂದ ಪಟ್ಟಣ ಪಂಚಾಯಿತಿ; ಪಟ್ಟಣ ಪಂಚಾಯಿತಿಯಿಂದ ಪುರಸಭೆ; ಪುರಸಭೆಯಿಂದ ನಗರಸಭೆ ಹಾಗೂ ನಗರಸಭೆಯಿಂದ ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ಉದ್ದೇಶಿಸಿದೆಯೇ; ಇದ್ದಲ್ಲಿ ಈ ಕುರಿತು ಸ್ಥಳವಾರು, ಜಿಲ್ಲಾವಾರು ಮಾಹಿತಿ ನೀಡುವುದು; | ರಾಜ್ಯದ ಸ್ಥಳೀಯ ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸಲು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಂದ ಸಲ್ಲಿಸಲಾಗುವ ದಾಖಲೆಗಳನ್ವಯ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರಿಂದ ಸರ್ಕಾರದಲ್ಲಿ ಪ್ರಸ್ತಾವನೆಗಳು ಸ್ವೀಕೃತವಾದಲ್ಲಿ ಅಂಥ ಸ್ಥಳೀಯ ಸಂಸ್ಥೆಯನ್ನು ಮೇಲ್ದರ್ಜೆಗೇರಿಸಲು ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರಲ್ಲಿನ ಮಾನದಂಡಗಳನ್ವಯ, ಆಡಳಿತಾತ್ಮಕ ಹಿತದೃಷ್ಟಿಯಿಂದ ನಿಯಮಾನುಸಾರ ಪರಿಶೀಲಿಸಲಾಗುತ್ತದೆ. |
| ಆ | ಜನಸಂಖ್ಯೆ, ಜನಸಾಂದ್ರತೆ ದೃಷ್ಟಿಯಿಂದ ಹಾಗೂ ವಾಣಿಜ್ಯ ಕೇಂದ್ರವಾಗಿ ವೇಗವಾಗಿ ಬೆಳವಣಿಗೆ ಕಾಣುತ್ತಿರುವ ಮಂಡ್ಯ ಜಿಲ್ಲೆಯ ಮದ್ದೂರು ತಾಲೂಕಿನ ಭಾರತೀನಗರವನ್ನು ಗ್ರಾಮ ಪಂಚಾಯಿತಿಯಿಂದ ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸುವ ಕುರಿತು ಸರ್ಕಾರದ ನಿಲುವೇನು (ಈ ಬಗ್ಗೆ ವಿವರ ನೀಡುವುದು); | ಮಂಡ್ಯ ಜಿಲ್ಲೆಯ ಮದ್ದೂರು ತಾಲೂಕಿನ ಭಾರತೀನಗರವನ್ನು ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿ ಹಾಗೂ ಮಂಡ್ಯ ನಗರಸಭೆಯನ್ನು ಮಂಡ್ಯ ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಗಳು ಸರ್ಕಾರದ ಪರಿಶೀಲನೆಯಲ್ಲಿ ಇರುವುದಿಲ್ಲ. ಈ ಸ್ಥಳೀಯ ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸಲು ಜಿಲ್ಲಾಧಿಕಾರಿ, ಮಂಡ್ಯ ಜಿಲ್ಲೆ ರವರಿಂದ ಸಲ್ಲಿಸಲಾಗುವ ದಾಖಲೆಗಳನ್ವಯ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರಿಂದ ಸರ್ಕಾರದಲ್ಲಿ ಪ್ರಸ್ತಾವನೆ ಸ್ವೀಕೃತವಾದಲ್ಲಿ ಮಾನದಂಡಗಳನ್ವಯ, ಆಡಳಿತಾತ್ಮಕ ಹಿತದೃಷ್ಟಿಯಿಂದ ನಿಯಮಾನುಸಾರ ಪರಿಶೀಲಿಸಲಾಗುತ್ತದೆ. |
| ಇ | ಮಂಡ್ಯ ನಗರಕ್ಕೆ ಹೊಂದಿಕೊಂಡಂತೆ ಇರುವ ಸ್ಥಳಗಳನ್ನು ಒಟ್ಟುಗೂಡಿಸಿ ಮಂಡ್ಯ ನಗರಸಭೆಯನ್ನು ಮಂಡ್ಯ ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸುವ ಕುರಿತು ಸರ್ಕಾರದ ನಿಲುವೇನು; ಈ ಕುರಿತು ಪ್ರಸ್ತಾವನೆ ಸ್ವೀಕೃತವಾಗಿದೆಯೇ? | |

**ಸಂಖ್ಯೆ:ನಅಇ 02 ಎಲ್‌ಸಿಕ್ಯೂ 2025.**

(ರಹೀಂ ಖಾನ್)
ಪೌರಾಡಳಿತ ಹಾಗೂ ಹಜ್ ಸಚಿವರು